ಅಂದಾಜುಗಳಿಗೆ ಅನುಮೋದನೆ ನೀಡಬೇಕೆಂದು ಕೋರುತ್ತೇನೆ.

ಉಪಾಧ್ಯಕ್ಷರು: ಈಗ 1998-99ನೇ ಸಾಲಿನ ಪೂರಕ ಅಂದಾಜುಗಳ (ಎರಡನೇಕಂತು) ಬೇಡಿಕೆಗಳ ಮೇಲೆ ಚರ್ಚೆ ಮುಕ್ತಾಯವಾಯಿತು. ಪ್ರಸ್ತಾವವನ್ನು ಸಭೆಯ ಮತಕ್ಕೆ ಹಾಕುತ್ತೇನೆ: ಪ್ರಸ್ತಾವ ಹೀಗಿದೆ:

''ದಿನಾಂಕ: 31-3-1999ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆಗಳ ಕ್ರಮಾಂಕ 1, 3, 4, 5, 6, 9, 11, 12, 13, 14, 15, 16, 20, 21, 22, 23, 24, 26, 28, 29, 32, 33, 34, 35, 36, 39, 40, 41, 42, 43, 44, 48, 51, 52, 54, 55, 56, 59, ಮತ್ತು 61. ಇವುಗಳಿಗೆ ಸಂಬಂಧಿಸಿದಂತೆ ಸಂದಾಯವಾಗುವ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಹಾಗೂ ಬಂಡವಾಳ ಖಾತೆಯಲ್ಲಿ ಮಂಜೂರು ಮಾಡಿದ ಮೊಬಲಗವನ್ನು ಸೇರಿ ಬೇಡಿಕೆಗಳಲ್ಲಿನ ಪಟ್ಟಿಯಲ್ಲಿ ನಮೂದಿಸಿದ ಮೊಬಲಗಿಗೆ ಮೀರದ ಮೊತ್ತವನ್ನು ಈ ಸಭೆಯು ಮುಂಜೂರು ಮಾಡುವುದು''

(ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ಪೂರಕ ಅಂದಾಜುಗಳಿಗೆ ಮಂಜೂರಾತಿ ನೀಡಲ್ಪಟ್ಟಿತು).

(ಅ) ಪರ್ಯಾಲೋಚನಾ ಪ್ರಸ್ತಾವ

ಕರ್ನಾಟಕ ಧನವಿನಿಯೋಗ (ಸಂಖ್ಯೆ: 3) ವಿಧೇಯಕ, 1998

ಶ್ರೀ ಸಿದ್ದರಾಮಯ್ಯ (ಉಪಮುಖ್ಯಮಂತ್ರಿಗಳು): ಮಾನ್ಯ ಉಪಾಧ್ಯಕ್ಷರೆ, ''1998ರ ಕರ್ನಾಟಕ ಧನವಿನಿಯೋಗ (ಸಂಖ್ಯೆ: 3) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.''

ಉಪಾಧ್ಯಕ್ಷರು: ಪ್ರಸ್ತಾವ ಏನೆಂದರೆ, ''1998ರ ಕರ್ನಾಟಕ ಧನವಿನಿಯೋಗ (ಸಂಖ್ಯೆ: 3) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಸಿದ್ದರಾಮಯ್ಯ (ಉಪಮುಖ್ಯಮಂತ್ರಿಗಳು): ಮಾನ್ಯ ಉಪಾಧ್ಯಕ್ಷರೆ, ''1998ರ ಕರ್ನಾಟಕ ಧನವಿನಿಯೋಗ (ಸಂಖ್ಯೆ: 3) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.''

ಉಪಾಧ್ಯಕ್ಷರು ★ ವಿಧೇಯಕವನ್ನು ಮಂಡಿಸಲಾಗಿದೆ. ★

ಕರ್ನಾಟಕ ಧನವಿಯೋಗ (ಸಂಖ್ಯೆ: 3) ವಿಧೇಯಕ 1998

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಸಿದ್ಧರಾಮಯ್ಯ (ಉಪಮುಖ್ಯಮಂತ್ರಿಗಳು): ಮಾನ್ಯ ಉಪಾಧ್ಯಕ್ಷರೆ, ''1998ರ ಕರ್ನಾಟಕ ಧನವಿನಿಯೋಗ (ಸಂಖ್ಯೆ: 3) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಉಪಾಧ್ಯಕ್ಷರು: ಪ್ರಸ್ತಾವ ಏನೆಂದರೆ: ''1998ರ ಕರ್ನಾಟಕ ಧನವಿನಿಯೋಗ (ಸಂಖ್ಯೆ: 3) ವಿಧೇಯಕವನ್ನು ಪರ್ಯಾಲೋಚಿಸುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2ರಿಂದ 3ರವರೆಗೆ

ಉಪಾಧ್ಯಕ್ಷರು: ''ಖಂಡ 2 ರಿಂದ 3 ರವರೆಗೆ, ಎರಡೂ ಸೇರಿದಂತೆ ಹಾಗೂ ಅನುಸೂಚಿ ಈ ವಿಧೇಯಕದ ಅಂಗವಾಗಿರುತ್ತದೆ.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2ರಿಂದ 3ರವರೆಗೆ ಎರಡೂ ಸೇರಿದಂತೆ ಹಾಗೂ ಅನುಸೂಚಿ ವಿಧೇಯಕಕ್ಕೆ ಸೇರಿಸಲ್ಪಟ್ಟಿತು).

ಖಂಡ 1 ಇತ್ಯಾದಿ

ಉಪಾಧ್ಯಕ್ಷರು: ಪ್ರಸ್ತಾವ ಏನೆಂದರೆ,

''ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರಸಂಹಿತೆ ವಿಧೇಯಕದ ಭಾಗವಾಗಿರುತ್ತದೆ.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

★ ಅನುಬಂಧ I

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರಸಂಹಿತೆಗಳನ್ನು ವಿಧೇಯಕ್ಕೆ ಸೇರಿಸಲ್ಪಟ್ಟಿತು).

ಪ್ರಸ್ತಾವದ ಅಂಗೀಕಾರ

ಶ್ರೀ ಸಿದ್ದರಾಮಯ್ಯ (ಉಪಮುಖ್ಯಮಂತ್ರಿಗಳು): ಮಾನ್ಯ ಉಪಾಧ್ಯಕ್ಷರೆ, 1998ರ ಕರ್ನಾಟಕ ಧನವಿನಿಯೋಗ (ಸಂಖ್ಯೆ: 3) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಉಪಾಧ್ಯಕ್ಷರು: ಪ್ರಸ್ತಾವ ಏನೆಂದರೆ, ''1998ರ ಕರ್ನಾಟಕ ಧನವಿನಿಯೋಗ (ಸಂಖ್ಯೆ: 3) ವಿಧೇಯಕವನ್ನು ಅಂಗೀಕರಿಸುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

13. ಶಾಸನ ರಚನಾ ಕಾರ್ಯಕಲಾಪಗಳು:

ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1. ತುಂಗಭದ್ರ ಸಕ್ಕರೆ (ದೇವಿ ಸಕ್ಕರೆ) ನಿಯಮಿತ

(ಉದ್ಯಮದ ಆರ್ಜನೆ ಮತ್ತು ವರ್ಗಾವಣೆ) ವಿಧೇಯಕ, 1998

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಉಮೇಶ್ ವಿ.ಕತ್ತಿ (ಸಕ್ಕರೆ ಸಚಿವರಲು): ಮಾನ್ಯ ಉಪಾಧ್ಯಕ್ಷರೆ, ''ವಿಧಾನ ಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿರುವ 1998ರ ತುಂಗಭದ್ರ ಸಕ್ಕರೆ (ದೇವಿ ಸಕ್ಕರೆ) ನಿಯಮಿತ (ಉದ್ಯಮದ ಅರ್ಜನೆ ಮತ್ತು ವರ್ಗಾವಣೆ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.''

ಪ್ರಸ್ತಾವವನ್ನು ಮಂಡಿಸಲ್ಪಟ್ಟಿತು.

ಉಪಾಧ್ಯಕ್ಷರು: ಪ್ರಸ್ತಾವ ಏನೆಂದರೆ, ''ವಿಧಾನಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿ ಇರುವ ''1998ರ ತುಂಗಭದ್ರ ಸಕ್ಕರೆ (ದೇವಿ ಸಕ್ಕರೆ) ನಿಯಮಿತ (ಉದ್ಯಮದ ಅರ್ಜನೆ ಮತ್ತು ವರ್ಗಾವಣೆ) ವಿಧೇಯಕವನ್ನು ಪರ್ಯಾಲೋಚಿಸುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು